ಪತ್ರಿಕೆ ಹೆಸರು : NAME OF THE NEWS PAPER: ದಿನಾಂಕ : DATE:

ಕಠಿಣ ಕ್ರಮ ಕೈಗೊಳ್ಳುವಂತೆ ರಾಜ್ಯಪಾಲರಿಗೆ ಸಿದ್ದರಾಮಯ್ಯ ಮನವಿ | ಸದನದಲ್ಲಿ ಭಾಗವಹಿಸಿದ ಪ್ರತಿಪಕ್ಷ ನಾಯಕರು

# ರಾಜ್ಯಪಾಲರ ದೂರಿನೊಂದಿಗೆ ಯತ್ನಾಳ್ ಗದ್ದಲ ಅಂತ್ಯ

5/3/2020

ವಿಶ್ವವಾಣಿ ಸುದ್ದಿಮನೆ ಬೆಂಗಳೂರು



ಬಿಜೆಪಿ ಶಾಸಕ ಬಸವಗೌಡ ಪಾಟೀಲ್ ಯತ್ನಾಳ್ ವಿರುದ್ಧ ರಾಜ್ಯಪಾಲರಿಗೆ ದೂರು ನೀಡುವ ಮೂಲಕ, ಪ್ರತಿಪಕ್ಷ ಕಾಂಗ್ರೆಸ್ ಎರಡು ದಿನ ಧರಣಿಯನ್ನು ಅಂತ್ಯಗೊಳಿಸಿತು.

ಸೋಮವಾರ ಬಜೆಟ್ ಅಧಿವೇಶನ ಆರಂಭವಾಗುತ್ತಿದ್ದಂತೆ ದೊರೆಸ್ವಾಮಿಯವರನ್ನು ನಕಲಿ ಸ್ವಾತಂತ್ರ್ಯ ಹೋರಾಟಗಾರ, ಪಾಕ್ ಏಜೆಂಟ್ ಎಂದು ಯತ್ನಾಳ್ ಅವಮಾನಿಸಿದ್ದಾರೆ ಎನ್ನುವ ವಿಷಯವನ್ನಿಟ್ಟುಕೊಂಡು ಬಾವಿಗಿಳಿದು ಪ್ರತಿಭಟನೆ ನಡೆಸಿದ್ದ ಕಾಂಗ್ರೆಸ್‌ಗೆ, ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಮಾತನಾಡಲು ಅವಕಾಶ ನೀಡದೇ, ಸಂವಿಧಾನದ ಬಗ್ಗೆ ವಿಶೇಷ ಚರ್ಚೆ ಆರಂಭಿಸಿದ್ದು ಭಾರಿ ಹಿನ್ನಡೆಗೆ ಕಾರಣವಾಗಿತ್ತು. ಮುಜುಗರದಿಂದ ತಪ್ಪಿಸಿಕೊಳ್ಳಲು, ಕಾಂಗ್ರೆಸ್ ನಾಯಕರು ಸಿದ್ದರಾಮಯ್ಯ ನೇತೃತ್ವದಲ್ಲಿ ರಾಜ್ಯಪಾಲ ವಿ.ಆರ್ ವಾಲಾ ಅವರನ್ನು ಭೇಟಿಯಾಗಿ ದೂರು ಸಲ್ಲಿಸಿದರು.

ಹಿರಿಯ ಸ್ವಾತಂತ್ರ್ಯ ಹೋರಾಟಗಾರರ ವಿರುದ್ಧ ಈ ರೀತಿಯ ಅವಹೇಳನಕಾರಿ ಹೇಳಿಕೆಯಿಂದ ದೇಶಕ್ಕೆ ಅಪಮಾನವಾಗಿದೆ. ಆದ್ದರಿಂದ ಯತ್ನಾಳ್ ವಿರುದ್ಧ ಕಠಿಣ ಕ್ರಮಕ್ಕೆ ಮುಂದಾಗಬೇಕು ಎಂದು ಮನವಿ ಪತ್ರದಲ್ಲಿ ದೂರು ನೀಡಿದ್ದಾರೆ. ಬಳಿಕ ವಿಧಾನಸಭೆ ಅಧಿವೇಶನದಲ್ಲಿ ಭಾಗವಹಿಸಿದ ಕಾಂಗ್ರೆಸ್ ನಾಯಕರು ಸಂವಿಧಾನದ ಚರ್ಚೆಯಲ್ಲಿ ಭಾಗವಹಿಸಿದರು.

ಆದರೆ ಇದಕ್ಕೂ ಮೊದಲು ಕಲಾಪ ಆರಂಭವಾಗುತ್ತಿದ್ದಂತೆ ಕಾಂಗ್ರೆಸ್ ಶಾಸಕರು, ರಾಜ್ಯಪಾಲರಿಗೆ ದೂರು ನೀಡಿರುವುದನ್ನು ಬಿಜೆಪಿ ನಾಯಕರು ಖಂಡಿಸಿದರು. ಈಗಾಗಲೇ ಸ್ಪೀಕರ್ ರೂಲಿಂಗ್ ನೀಡಿದ ಬಳಿಕ ಮತ್ತೊಮ್ಮೆ ರಾಜ್ಯಪಾಲರ ಬಳಿ ದೂರು ನೀಡಲು ಹೋಗುವುದು ಸ್ಪೀಕರ್ ಪೀಠಕ್ಕೆ ಅವಮಾನಿಸಿದಂತೆ. ಆದ್ದರಿಂದ ಕೂಡಲೇ ಕಾಂಗ್ರೆಸ್ ಸದಸ್ಯರು ಸ್ಪೀಕರ್ ಅವರ ಕ್ಷಮೆಯಾಚಿಸಬೇಕು ಎಂದು ಒತ್ತಾಯಿಸಿದರು.

ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್. ಈಶ್ವರಪ್ಪ ಮಾತನಾಡಿ, ನೋಟಿಸ್ ನೀಡದ ಹಿನ್ನೆಲೆಯಲ್ಲಿ ಸ್ಪೀಕರ್ ಅವಕಾಶ ನೀಡಲಿಲ್ಲ. ಆದರೆ ಅವರ ವಿರುದ್ಧ ರಾಜ್ಯಪಾಲರಿಗೆ ದೂರು ನೀಡಿರುವುದು ಸರಿಯಲ್ಲ ಎಂದು ಹೇಳಿದರು. ಬಿಜೆಪಿ ಶಾಸಕ ಅರಗ ಜ್ಞಾನೇಂದ್ರ ಮಾತನಾಡಿ, ಕಾಂಗ್ರೆಸ್‌ನವರು ಜುಜುಬಿ ಕಾರಣಕ್ಕಾಗಿ ಧರಣಿ ನಡೆಸುತ್ತಿದ್ದಾರೆ. ದೊರೆಸ್ವಾಮಿ ಅವರ ವಿರುದ್ಧ ನೀಡಿರುವ ಹೇಳಿಕೆಗೆ ಉತ್ತರ ನೀಡಲು ದೊರೆಸ್ವಾಮಿ ಶಕ್ತರಿದ್ದಾರೆ. ಅವರು ಉತ್ತರ ಕೊಡುತ್ತಿದ್ದರು. ಆದರೆ ನೀವು ಕಲಾಪಕ್ಕೆ ಅಡ್ಡಿ ಪಡಿಸುತ್ತಿರುವುದು ಸರಿಯಲ್ಲ ಎಂದು ಹೇಳಿದರು.

ಈ ವೇಳೆ ಮಧ್ಯಪ್ರವೇಶಿಸಿದ ಪ್ರಿಯಾಂಕ್ ಖರ್ಗೆ ಮಾತನಾಡಿ, ಸಂವಿಧಾನ ಬಗ್ಗೆ ಚರ್ಚೆ ಸ್ವಾಗತಾರ್ಹ. ಆದರೆ ಈ ಸಂವಿಧಾನ ಹೇಗೆ ಅಸ್ತಿತ್ವಕ್ಕೆ ಬಂದಿದೆ ಎಂಬುದನ್ನು ಮೊದಲು ತಿಳಿದುಕೊಳ್ಳಿ ಎಂದು ತಿರುಗೇಟು ನೀಡಿದರು. ಈ ವೇಳೆ ಆಡಳಿತ ಮತ್ತು ಪ್ರತಿಪಕ್ಷ ಸದಸ್ಯರ ನಡುವೆ ಮಾತಿನ ಚಕಮಕಿ ನಡೆಯಿತು. ಅಷ್ಟರಲ್ಲಿ ಸಿದ್ದರಾಮಯ್ಯ ಸದನಕ್ಕೆ ಆಗಮಿಸಿ ಕಾಂಗ್ರೆಸ್ ಧರಣಿ ಹಿಂದಕ್ಕೆ ಪಡೆಯುತ್ತಿದ್ದೇವೆ ಎಂದು ಹೇಳಿ ತಮ್ಮ ಆಸನಕ್ಕೆ ಮರಳಿದರು. ಈ ವೇಳೆ ಮಾತನಾಡಿದ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ, ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಅವರು ಧರಣಿ ಹಿಂಪಡೆಯುತ್ತಿರುವುದು ಸ್ವಾಗತಾರ್ಹ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಭಿನ್ನಾಭಿಪ್ರಾಯ ಸಹಜ. ಆದರೆ ಪರಸ್ಪರ ಸಹಕಾರ ಇರಬೇಕು, ಆದ್ದರಿಂದ ಧರಣಿ ಹಿಂಪಡೆದಿರುವುದಕ್ಕೆ ಧನ್ಯವಾದ ಸಲ್ಲಿಸುತ್ತೇನೆ ಎಂದರು.

## ಸಾಂವಿಧಾನಿಕ ಹುದ್ದೆ ಗೌರವಿಸಿ

ಗೃಹ ಸಚಿವ ಬಸವರಾಜ ಬೊಮ್ಮಾಯಿ ಮಾತನಾಡಿ, ಸ್ಪೀಕರ್ ಸ್ಥಾನ ಸಾಂವಿಧಾನಿಕ ಹುದ್ದೆಯಾಗಿದ್ದು, ಸಂವಿಧಾನದ ಒಂದು ಅಂಗದ ವಿರುದ್ಧ ಮತ್ತೊಂದು ಸಂಸ್ಥೆಗೆ ದೂರು ನೀಡುವುದು ಸರಿಯಲ್ಲ. ಸ್ಪೀಕರ್ ಅವರು ಸಂವಿಧಾನ ಬದ್ಧವಾಗಿ ಕೆಲಸ ಮಾಡಿದ್ದಾರೆ. ಅವರ ನೋಟಿಸ್‌ಗೆ ರೂಲಿಂಗ್ ನೀಡಿದ್ದು, ಸ್ಪೀಕರ್ ಅವರ ರೋಲಿಂಗ್ ಅಂತಿಮ, ಅದನ್ನು ಪ್ರಶ್ನಿಸಿ ಇನ್ನೊಂದು ಸಂವಿಧಾನ ಸಂಸ್ಥೆಗೆ ಹೋಗುವುದು ಸರಿಯಲ್ಲ. ಜನಪರ ಅಥವಾ ಜನರಿಗೆ ತೊಂದರೆಯಾಗುವಂತಹ ವಿಷಯವಾಗಿದ್ದರೆ ಸರಕಾರ ಚರ್ಚೆಗೆ ಸಿದ್ಧವಾಗಿರುತ್ತಿತ್ತು. ಎಲ್ಲೋ ಹೊರಗಡೆ ಹೇಳಿರುವ ವಿಷಯವನ್ನು ಇಲ್ಲಿ ತಂದು ಕಲಾಪಕ್ಕೆ ಅಡ್ಡಿ ಪಡಿಸುವುದು ಸರಿಯಲ್ಲ. ಬೇಕಿದ್ದರೆ ಹೇಳಿಕೆಯ ವಿರುದ್ಧ ಮಾನನಷ್ಟ ಮೊಕದ್ದಮೆ ಹಾಕಬಹುದು. ಆದರೆ ಸದನಕ್ಕೆ ಅಡ್ಡಿ ಪಡಿಸುವುದು ಸರಿಯಲ್ಲ. ಸ್ಪೀಕರ್ ವಿರುದ್ಧ ಮಾಡಿರುವ ಆರೋಪಕ್ಕೆ ಕ್ಷಮೆಯಾಚಿಬೇಕು ಎಂದು ಒತ್ತಾಯಿಸಿದರು.